**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2157 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.03.2022. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ಕ್ರೋಢೀಕರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದ ಗ್ರಾಮ ಪಂಚಾಯಿತಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ಮತ್ತು ಅನುಸೂಚಿ–IV ರಂತೆ ಭೂಮಿ ಮತ್ತು ಕಟ್ಟಡಗಳು, ಕೈಗಾರಿಕಾ ಕಟ್ಟಡಗಳು, ಮೊಬೈಲ್ ಟವರ್‌ಗಳು, ವಿಮಾನ ನಿಲ್ದಾಣ, ವಿಂಡ್ ಮಿಲ್‌ಗಳು, ಸೋಲಾರ್ ಪಾರ್ಕ್‌ಗಳ ಮೇಲೆ ತೆರಿಗೆ ಮತ್ತು ನೀರಿನ ತೆರಿಗೆಯನ್ನು ವಿಧಿಸುವುದರಿಂದ ಸ್ವಂತ ಸಂಪನ್ಮೂಲಗಳನ್ನು ಕ್ರೋಢೀಕರಿಸಿಕೊಳ್ಳಬಹುದಾಗಿದೆ. |
| (ಆ) | ರಾಜ್ಯದ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ತೆರಿಗೆಗೆ ಒಳಪಡದ ಕಟ್ಟಡಗಳ ಸಂಖ್ಯೆ ಎಷ್ಟು; | ರಾಜ್ಯದ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ತೆರಿಗೆಗೆ ಒಳಪಡದ ಕಟ್ಟಡಗಳ ಸಂಖ್ಯೆ: 1508208. |
| (ಇ) | ತೆರಿಗೆಗೆ ಒಳಪಡದ ಕಟ್ಟಡಗಳನ್ನು ತೆರಿಗೆ ವ್ಯಾಪ್ತಿಗೆ ತರುವ ಮೂಲಕ ಸಂಪನ್ಮೂಲ ಕ್ರೋಢೀಕರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಗ್ರಾಮೀಣ ಭಾಗದ ಆಸ್ತಿಗಳ ತಂತ್ರಾಂಶ ಇ–ಸ್ವತ್ತು ಹಾಗೂ ನಗರ ಆಸ್ತಿಗಳ ತಂತ್ರಾಂಶ ಇ–ಆಸ್ತಿ ಈ ಎರಡು ತಂತ್ರಾಂಶಗಳ ಅನುಷ್ಠಾನದಿಂದ ಉಂಟಾಗುತ್ತಿರುವ ಸಮಸ್ಯೆಗಳ ಕುರಿತು ಪರಿಶೀಲಿಸಿ ಪರಿಹಾರಗಳನ್ನು ಕಂಡುಕೊಳ್ಳುವ ಉದ್ದೇಶದಿಂದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯ ಶಿಫಾರಸ್ಸುಗಳು ಬಂದ ನಂತರ ಅಗತ್ಯ ಕ್ರಮ ವಹಿಸಲಾಗುವುದು. |

ಸಂ. ಗ್ರಾಅಪ 131 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.